




ದಿನಾಂಕ: 04.10.2021 ರಂದು ನರಗುಂದದಲ್ಲಿ ನಡೆದ ಶಿಕ್ಷಕರ ಹಾಗೂ ಶಿಕ್ಷಣ ಸಂಸ್ಥೆಗಳ ಜ್ವಲಂತ ಸಮಸ್ಯೆಗಳ ಪರಿಹಾರಕ್ಕಾಗಿ ಸಭಾಪತಿಗಳೊಂದಿಗೆ ಶಿಕ್ಷಕರ ಸಂವಾದ ಕಾರ್ಯಕ್ರಮದಲ್ಲಿ ವಿಧಾನಪರಿಷತ್ತಿನ ಸಭಾಪತಿ ಶ್ರೀ ಬಸವರಾಜ ಹೊರಟ್ಟಿಯವರು ಪಾಲ್ಗೊಂಡು ಹಲವು ಸಮಸ್ಯೆಗಳ ಬಗ್ಗೆ ಚರ್ಚಿಸಿದರು. ನಂತರ ಗದಗ ಜಿಲ್ಲಾ ಮಾಧ್ಯಮಿಕ ಶಾಲಾ ನೌಕರರ ಸಂಘದ ವತಿಯಿಂದ ಅಭಿನಂದನೆ ಸ್ವೀಕರಿಸದರು. ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಮಾಧ್ಯಮಿಕ ಶಾಲಾ ನೌಕರರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.







ದಿನಾಂಕ: 05.10.2021 ರಂದು ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ (ರಿ) ಜಿಲ್ಲಾ ಘಟಕ ಧಾರವಾಡ ಇವರು ಆಯೋಜಿಸಿದ್ದ ಅಂತರಾಷ್ಟ್ರೀಯ ಶಿಕ್ಷಕರ ದಿನಾಚರಣೆ ಹಾಗೂ ಉತ್ತಮ ಶಾಲೆಗಳಿಗೆ–ಶಿಕ್ಷಕರಿಗೆ ಜಿಲ್ಲಾ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ವಿಧಾನಪರಿಷತ್ತಿನ ಸಭಾಪತಿ ಶ್ರೀ ಬಸವರಾಜ ಹೊರಟ್ಟಿಯವರು ಪಾಲ್ಗೊಂಡು ಉತ್ತಮ ಶಾಲೆಗಳಿಗೆ–ಶಿಕ್ಷಕರಿಗೆ ಪ್ರಶಸ್ತಿ ಪ್ರಧಾನ ಮಾಡಿದರು.






ದಿನಾಂಕ: 07.10.2021 ರಂದು ಮೈಸೂರು ದಸರಾ–2021 ರ ಪ್ರಯುಕ್ತ ಅರಮನೆ ಆವರಣದಲ್ಲಿ ಆಯೋಜಿಸಿದ್ದ ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟನಾ ಮತ್ತು ರಾಜ್ಯ ಸಂಗೀತ ವಿದ್ವಾನ್ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಶ್ರೀ ಬಸವರಾಜ ಹೊರಟ್ಟಿಯವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ನಂತರ ಹಲವು ಸಂಗೀತ ವಿದ್ವಾಂಸರುಗಳಿಗೆ ಪ್ರಶಸ್ತಿ ಪ್ರಧಾನ ಮಾಡಿದರು. ಕಾರ್ಯಕ್ರಮದಲ್ಲಿ ವಿಧಾನಸಭಾಧ್ಯಕ್ಷರಾದ ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿಯವರು, ಸಹಕಾರ ಸಚಿವರಾದ ಶ್ರೀ ಎಸ್.ಟಿ ಸೊಮಶೇಖರ್, ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ಶ್ರೀ ವಿ. ಸುನೀಲ್ ಕುಮಾರ್ ಶಾಸಕರಾದ ಶ್ರೀ ಎಸ್.ಎ ರಾಮದಾಸ್ ಮತ್ತು ಮಾಜಿ ಸಚಿವರು ಹಾಗೂ ಶಾಸಕರಾದ ಶ್ರೀ ಜಿ.ಟಿ ದೇವೇಗೌಡ ರವರು ಉಪಸ್ಥಿತರಿದ್ದರು.